# ಕರ್ನಾಟಕ ಸರ್ಕಾರ

ಸಂಖ್ಯೆ : ಸಕನಿ/ಮೀ.ಜಾ.ಕೋ-1/ಸಿಆರ್-87/2017-18

ಸಮಾಜ ಕಲ್ಯಾಣ ಆಯುಕ್ತರ ಕಚೇರಿ,
5ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ :08.02.2019

ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ,
ಜ್ಞಾನ ಭಾರತಿ ಆವರಣ,
ಬೆಂಗಳೂರು.

ಮಾನ್ಯರೇ,

ವಿಷಯ: ಬೆಂಗಳೂರು ವಿಶ್ವವಿದ್ಯಾಲಯದ ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯ ಬಗ್ಗೆ.

ಉಲ್ಲೇಖ:
1. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ ಸಚಿವಾಲಯ ಇವರ ಪತ್ರ ಸಂಖ್ಯೆ: ಕವಿಸಸ/ಅಜಾಅಪ/47/ಅರ್ಜಿ/2018-19, ದಿನಾಂಕ: 01.02.2019.
2. ಸಮಾಜ ಕಲ್ಯಾಣ ಇಲಾಖೆಯ ತನಿಖಾ ವರದಿ ದಿನಾಂಕ: 15.02.2018.
3. ಈ ಕಚೇರಿ ಸಮ ಸಂಖ್ಯೆ ಪತ್ರ ದಿನಾಂಕ: 29.01.2019.
4. ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ (ನೋಂ), ಇವರ ಪತ್ರ ದಿನಾಂಕ: 04.01.2019.
5. ಈ ಕಚೇರಿ ಸಮ ಸಂಖ್ಯೆ ಪತ್ರ ದಿನಾಂಕ: 24.11.2018.
6. ಈ ಕಚೇರಿ ಅರೆ ಸರ್ಕಾರಿ ಪತ್ರ ದಿನಾಂಕ: 24.11.2018.
7. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 658 ಸೇನೇನಿ 2018, ದಿನಾಂಕ: 27.12.2018.
8. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 658 ಸೇನೇನಿ 2018, ದಿನಾಂಕ: 24.01.2019.

Urgent
14/2/2019

RPT 8294
14/2

14/2/2019

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (4)ರ ಮನವಿಯಲ್ಲಿ ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ (ನೋಂ), ಬೆಂಗಳೂರು ಇವರು ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ/ ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಮಾನ್ಯ ಅಧ್ಯಕ್ಷರಿಗೆ ಮನವಿ ಸಲ್ಲಿಸಿದ್ದು, ಸದರಿ ಮನವಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯು ಬೆಂಗಳೂರು ವಿಶ್ವವಿದ್ಯಾಲಯದ ಬೋಧಕ ವೃಂದದಲ್ಲಿ ಒಟ್ಟು 55 ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸಿದ್ದು, ಸದರಿ ಹುದ್ದೆಗಳನ್ನು ನೇಮಕಾತಿ ಮಾಡಲು ಬೆಂಗಳೂರು ವಿಶ್ವವಿದ್ಯಾಲಯದಿಂದ ದಿನಾಂಕ: 21.03.2018 ರಂದು ಅಧಿಸೂಚನೆಯನ್ನು ಹೊರಡಿಸಿರುತ್ತಾರೆ. ಆದರೆ, ಇದುವರೆಗೂ ನೇಮಕಾತಿ ಕೈಗೊಂಡಿರುವುದಿಲ್ಲ. ಆದ್ದರಿಂದ ಸದರಿ ಬ್ಯಾಕ್‌ಲಾಗ್ ನೇಮಕಾತಿ ಪ್ರಕ್ರಿಯೆಯನ್ನು 15 ದಿನಗಳೊಳಗಾಗಿ ಪೂರ್ಣಗೊಳಿಸಬೇಕೆಂದು ಮನವಿ ಸಲ್ಲಿಸಿರುತ್ತಾರೆ.

ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವಂತೆ ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಆದ್ಯತೆಯ ಮೇರೆಗೆ ಭರ್ತಿ ಮಾಡಲು ಕ್ರಮವಹಿಸುವಂತೆ ದಿನಾಂಕ: 17.10.2018 ರಂದು ಮಾನ್ಯ ಸಮಾಜ ಕಲ್ಯಾಣ ಇಲಾಖೆಯ ಸಚಿವ ಸಂಪುಟ ಉಪಸಮಿತಿ ಸಭೆಯಲ್ಲಿ ಮಾನ್ಯ ಸಚಿವರು ಸ್ಪಷ್ಟ ನಿರ್ದೇಶನ ನೀಡಿರುತ್ತಾರೆ. ಉಲ್ಲೇಖ (3), (5) ಹಾಗೂ (6) ರ ಈ ಕಚೇರಿ ಪತ್ರಗಳಲ್ಲಿ ಹಾಗೂ ಉಲ್ಲೇಖ (7), (8) ರ ಸುತ್ತೋಲೆಗಳಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಪ್ರಥಮ ಆದ್ಯತೆಯ ಮೇರೆಗೆ ಭರ್ತಿ ಮಾಡಲು ಸೂಚನೆಗಳನ್ನು ನೀಡಲಾಗಿರುತ್ತದೆ. ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡದೇ ಇದ್ದಲ್ಲಿ, ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ/ ಅನುಸೂಚಿತ ಬುಡಕಟ್ಟುಗಳು ಹಾಗೂ ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) 1990 ರ ಅಧಿನಿಯಮ ಕಲಂ 5 ರ ಪ್ರಕಾರ ಸದರಿ ಅಧಿನಿಯಮ ಅಥವಾ ಅದರ ಅಡಿಯಲ್ಲಿ ರಚಿಸಲಾದ ನಿಯಮಗಳನ್ನು ಉಲ್ಲಂಘಿಸಿ, ಯಾವೊಬ್ಬ ನೇಮಕಾತಿ ಪ್ರಾಧಿಕಾರಿಯು ನೇಮಕ ಮಾಡಿದರೆ ಅಥವಾ ವಿಶ್ವವಿದ್ಯಾಲಯದಲ್ಲಿ ಅಥವಾ ಶಿಕ್ಷಣ ಸಂಸ್ಥೆಯಲ್ಲಿ ಯಾವುದೇ ವ್ಯಾಸಂಗ ಕ್ರಮಕ್ಕೆ ಪ್ರವೇಶಾವಕಾಶ ನೀಡುವ ಯಾವೊಬ್ಬ ಪ್ರಾಧಿಕಾರಿಯು ಅಂಥ ಪ್ರವೇಶಾವಕಾಶ ನೀಡಿದರೆ, ಅಂತಹವರನ್ನು ಒಂದು ಸಾವಿರ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆ ಮತ್ತು ಆರು ತಿಂಗಳವರೆಗೆ ವಿಸ್ತರಿಸಬಹುದಾದ ಅವಧಿಯ ಜೈಲು ಶಿಕ್ಷೆಯನ್ನು ವಿಧಿಸಬಹುದಾಗಿರುತ್ತದೆ. ಮುಂದುವರೆದು, ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ/ ಅನುಸೂಚಿತ ಬುಡಕಟ್ಟುಗಳು ಹಾಗೂ ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ನಿಯಮಗಳು 1992 ರ ನಿಯಮ 10(4) ರನ್ವಯ ನೇಮಕಾತಿ ಪ್ರಾಧಿಕಾರವನ್ನು ಕಾನೂನು ಕ್ರಮಕ್ಕೂ ಸಹ ಗುರಿಪಡಿಸಲು ಅವಕಾಶವಿರುತ್ತದೆ ಎಂದು ತಿಳಿಸಲಾಗಿರುತ್ತದೆ.

ಆದ್ದರಿಂದ, ಉಲ್ಲೇಖ (7), (8) ರ ಸರ್ಕಾರದ ಸುತ್ತೋಲೆಗಳನ್ವಯ ಬ್ಯಾಕ್‌ಲಾಗ್ ಹುದ್ದೆಗಳನ್ನು ಪ್ರಥಮ ಆದ್ಯತೆಯ ಮೇರೆಗೆ ಭರ್ತಿ ಮಾಡಿ ಈ ಕಚೇರಿಗೆ ವರದಿ ನೀಡಲು ಕೋರಿದೆ.

ತಮ್ಮ ನಂಬುಗೆಯ,

11.2.19

ಆಯುಕ್ತರು,
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು

**ಪ್ರತಿಯನ್ನು** :-

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರ ಮಾಹಿತಿಗಾಗಿ ಸಲ್ಲಿಸಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಇವರ ಮಾಹಿತಿಗಾಗಿ ಸಲ್ಲಿಸಿದೆ.
3. ಕಾರ್ಯದರ್ಶಿಗಳು, ಕರ್ನಾಟಕ ವಿಧಾನಸಭಾ ಸಚಿವಾಲಯ, ಬೆಂಗಳೂರು ಇವರ ಮಾಹಿತಿಗಾಗಿ ಸಲ್ಲಿಸಿದೆ.